ರೋಣದಲ್ಲಿನ ತೋಟಗಾರಿಕಾ ಕಚೇರಿಯನ್ನು ಮೇಲ್ದರ್ಜೆಗೇರಿಸುವ ಬಗ್ಗೆ

1874(521); ಶ್ರೀ ಗುರುಪಾದಪ್ಪ ಸಂಗನಗೌಡ ಪಾಟೀಲ (ರೋಣ)

ಅ) ರೋಣ ತಾಲ್ಲೂಕು ಗದಗ ಜಿಲ್ಲೆಯಲ್ಲಿಯೇ ಅತೀ ದೊಡ್ಡ ತಾಲ್ಲೂಕಾಗಿದ್ದು, ಈ ಭಾಗದ ರೈತರುಗಳು ತೋಟಗಾರಿಕಾ ಬೆಳೆಗಳಲ್ಲಿ ಆಸಕ್ತಿ ಹೊಂದಿದ್ದು, ರೋಣದಲ್ಲಿರುವ ಸಹಾಯಕ ತೋಟಗಾರಿಕಾ ಬೆಳೆಗಳಲ್ಲಿ ಆಸಕ್ತಿ ಹೊಂದಿದ್ದು, ರೋಣದಲ್ಲಿರುವ ಸಹಾಯಕ ತೋಟಗಾರಿಕಾ ನಿದೇಶಕರ ಕಛೇರಿಯಿಂದ ಒದಗಿಸಲಾಗುತ್ತಿರುವ ಸೌಲಭ್ಯಗಳಿಗೆ ಅತೀ ಹೆಚ್ಚಿನ ಬೇಡಿಕೆ ಇದ್ದು, ಸಾಕಷ್ಟು ರೈತರುಗಳಿಗೆ ಸರಕಾರದ ಯೋಜನೆಗಳು ಸಿಕ್ಕಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ, ಕ್ಷೇತ್ರದಲ್ಲಿ ವ್ಯಾಪ್ತಿಗಿಂತ ಕಡಿಮೆ ಅನುದಾನ ಬಿಡುಗಡೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ರೈತರುಗಳಿಗೆ ಇನ್ನೂ ಹೆಚ್ಚಿನ ತೋಟಗಾರಿಕಾ ಬೆಳೆಗಳ ಸೌಲಭ್ಯಗಳನ್ನು ಒದಗಿಸುವ ಸಲುವಾಗಿ ರೋಣದಲ್ಲಿರುವ ಸಹಾಯಕ ತೋಟಗಾರಿಕೆ ನಿರ್ದೇಶಕರ ಕಚೇರಿಯನ್ನು ಮೇಲ್ದರ್ಜೆಗೇರಿಸುವ ಬಗ್ಗೆ ಸರ್ಕಾರದ ಚಿಂತನೆಯೇನು?

ಡಾ॥ ಶಾಮನೂರು ಶಿವಶಂಕರಪ್ಪ (ಮಾನ್ಯ ತೋಟಗಾರಿಕೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು)

ಅ) ಎಲ್ಲಾ ಯೋಜನೆಗಳ ಸಂಬಂಧ ರಾಜ್ಯ ಮಟ್ಟದಲ್ಲಿ ಅನುದಾನ ನಿಗದಿ ಆಗುತ್ತದೆ. ಇದನ್ನು ಜಿಲ್ಲಾವಾರು ಬಿಡುಗಡೆ ಮಾಡಲಾಗುತ್ತದೆ. ನಂತರ ಜಿಲ್ಲೆಗಳಲ್ಲಿ ತಾಲ್ಲೂಕುವಾರು ಹಂಚಿಕೆ ಮಾಡಲಾಗುತ್ತದೆ. ಇದು ಲಭ್ಯವಾಗುವ ಅನುದಾನವನ್ನು ಅಲವಂಬಿಸಿದೆ. ಈ ಹಿನ್ನೆಲೆಯಲ್ಲಿ ಪ್ರತಿ ತಾಲ್ಲೂಕಿಗೂ ಅನುದಾನ ಬಿಡುಗಡೆ ಆಗುತ್ತದೆ. ರೈತರ ಬೇಡಿಕೆ

ಸಾಮಾನ್ಯವಾಗಿ ಎಲ್ಲ ಜಿಲ್ಲಾಮಟ್ಟ ತಾಲ್ಲೂಕುಗಳಲ್ಲೂ ಅಧಿಕವಾಗಿದ್ದು, ಅನುದಾನದ ಲಭ್ಯತೆ ಮೇಲೆ ರೈತರಿಗೆ ಅನುದಾನ ನೀಡಲಾಗುತ್ತದೆ.

ಆ) ಹೌದು, ಲಭ್ಯತೆಯನ್ನು ಆಧರಿಸಿ ಅನುದಾನವನ್ನು ಬಿಡುಗಡೆ ಮಾಡಲಾಗುತ್ತಿದೆ.

ಇ) ರೋಣದಲ್ಲಿರುವ ಸಹಾಯಕ ತೋಟಗಾರಿಕೆ ನಿರ್ದೇಶಕರ ಕಛೇರಿಯನ್ನು ಮೇಲ್ದರ್ಜೆಗೇರಿಸುವ ಚಿಂತನೆ ಸರ್ಕಾರದ ಮುಂದಿರುವುದಿಲ್ಲ.

ಬೀದರ್ ವಿಧಾನಸಭಾ ಕ್ಷೇತ್ರದಲ್ಲಿ ಅಭಿವೃದ್ಧಿ ಕಾರ್ಯಕ್ರಮಗಳು

1875(1199); ಡಾ॥ ಗುರುಪಾದಪ್ಪ ನಾಗಮಾರಪಳ್ಳಿ (ಬೀದರ್)

ಅ) ಬೀದರ್ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಪೌರಾಡಳಿತ ಇಲಾಖೆ ವತಿಯಿಂದ ಜಾರಿಗೊಳಿಸಲಾಗುತ್ತಿರುವ ಅಭಿವೃದ್ಧಿ ಕಾರ್ಯಗಳ ವಿವರಗಳೇನು;

ಆ) ಕಳೆದ ಎರಡು ವರ್ಷಗಳ ಅವಧಿಯಲ್ಲಿ ವಿವಿಧ ಯೋಜನೆಗಳಡಿಯಲ್ಲಿ ಇದಕ್ಕಾಗಿ ಬಿಡುಗಡೆಯಾದ ಮತ್ತು ವೆಚ್ಚವಾದ ಹಣವೆಷ್ಟು; ಈ ಕ್ಷೇತ್ರದಲ್ಲಿ ಇಲ್ಲಿಯವರೆವಿಗೆ ಪ್ರತಿ ಕಾಮಗಾರಿಗೆ ವೆಚ್ಚ ಮಾಡಲಾದ ಹಣವೆಷ್ಟು; ಎಷ್ಟು ಕಾಮಗಾರಿಗಳು ಪೂರ್ಣಗೊಂಡಿವೆ; ಮತ್ತು ಎಷ್ಟು ಕಾಮಗಾರಿಗಳು ಅಪೂರ್ಣವಾಗಿವೆ; (ಪ್ರತಿ ಕಾಮಗಾರಿಗಳ ಬಗ್ಗೆ ಸಂಪೂರ್ಣ ವಿವರಗಳನ್ನು ಒದಗಿಸುವುದು);

ಇ) ಬಹುತೇಕ ಕಾಮಗಾರಿಗಳು ಮಂದಗತಿಯಲ್ಲಿ ಸಾಗುತ್ತಿರುವುದಕ್ಕೆ ಕಾರಣಗಳೇನು; ಕಾಮಗಾರಿಗಳನ್ನು ಶೀಘ್ರಗತಿಯಲ್ಲಿ ಪೂರ್ಣಗೊಳಿಸಲು ಸರ್ಕಾರದ ಮುಂದಿನ ಕ್ರಮಗಳೇನು?